**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಶ್ರೀಮತಿ ರೇಖಾ, ಹಿಂದಿನ ಅಧ್ಯಕ್ಷರು, ರಮ್ಮನಹಳ್ಳಿ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)(vi) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಮೈಸೂರು ಇವರ ಪತ್ರ ಸಂಖ್ಯೆ:ಡಿಇಎ3/16/2017-18, ದಿನಾಂಕ:03.07.2018.
2. ಸರ್ಕಾರದ ಆದೇಶ ಪತ್ರ ಸಂಖ್ಯೆ:ಗ್ರಾಅಪ 1135 ಗ್ರಾಪಂಅ 208, ದಿನಾಂಕ:02.02.2019.
3. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 203 ಗ್ರಾಪಂಅ 2019, ದಿನಾಂಕ:19.02.2021.
4. ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರ ಪತ್ರ ಸಂಖ್ಯೆ:ಚುನಾವಣೆ ಸಿಆರ್:08/2018-19, ದಿನಾಂಕ:26.03.2020.
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 363 ಗ್ರಾಪಂಅ 2020, ದಿನಾಂಕ:06.05.2020.
6. ಸರ್ಕಾರದ ವಿಚಾರಣಾ ನೋಟೀಸು ಸಂಖ್ಯೆ: ಗ್ರಾಅಪ 363 ಗ್ರಾಪಂಅ 2020, ದಿನಾಂಕ:27.01.2021, 18.02.2021, 15.04.2021, 22.04.2021, 02.07.2021, 20.07.2021, 21.08.2021.

***

ಶ್ರೀಮತಿ ರೇಖಾ, ಹಿಂದಿನ ಅಧ್ಯಕ್ಷರು, ರಮ್ಮನಹಳ್ಳಿ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರು(ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರು ತಮ್ಮ ಅಧಿಕಾರಾವಧಿಯಲ್ಲಿ ಈ ಕೆಳಕಂಡ ಆರೋಪಗಳನ್ನು ಎಸಗಿರುವುದಾಗಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ ರವರು ಮೇಲೆ ಓದಲಾದ ಕ್ರಮಾಂಕ (1)ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

**ದೋಷಾರೋಪಣೆ:-**

ಮೈಸೂರು ತಾಲ್ಲೂಕು ಪಂಚಾಯತ್ ಸಹಾಯಕ ಲೆಕ್ಕಾಧಿಕಾರಿ ರಮ್ಮನಹಳ್ಳಿ ಗ್ರಾಮ ಪಂಚಾಯಿತಿಯ ಬಿ.ಆರ್.ಎಸ್. ಮಾಡುವ ಸಂಧರ್ಭದಲ್ಲಿ 14ನೇ ಹಣಕಾಸು ಯೋಜನೆಯ ನಗದು ಪುಸ್ತಕ ಪರಿಶೀಲಿಸಿದಾಗ 14ನೇ ಹಣಕಾಸು ಯೋಜನೆಯ ಖಾತಾ ಸಂಖ್ಯೆ:64184082329 ರಿಂದ ದಿನಾಂಕ:29.12.2017 ರಂದು ಚೆಕ್ ಸಂಖ್ಯೆ 463379 ರಲ್ಲಿ ರೂ.5.00 ಲಕ್ಷಗಳು ಮತ್ತು ಚೆಕ್ ಸಂಖ್ಯೆ 463377 ರಲ್ಲಿ ರೂ.4.80 ಲಕ್ಷಗಳನ್ನು ಒಟ್ಟು ರೂ.9.80 ಲಕ್ಷಗಳ ಎರಡು ಚೆಕ್‌ಗಳಲ್ಲಿ ಹಣ ಪಾವತಿಸಲಾಗಿರುವುದು ಕಂಡುಬಂದಿರುತ್ತದೆ. ಗ್ರಾಮ ಪಂಚಾಯಿತಿಯ ಹಾಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರನ್ನು ಈ ಬಗ್ಗೆ ಮಾಹಿತಿ ನೀಡುವಂತೆ ತಿಳಿಸಲಾಗಿ ಪಾವತಿಯಾಗಿರುವ ಸದರಿ ಮೊತ್ತಕ್ಕೆ ವೆಚ್ಚ ಭರಿಸಿರುವ ಬಗ್ಗೆ ಯಾವುದೇ ದಾಖಲಾತಿಗಳು ಪಂಚಾಯಿತಿಯಲ್ಲಿ ಲಭ್ಯವಿಲ್ಲದಿರುವುದಾಗಿ ಲಿಖಿತವಾಗಿ ತಿಳಿಸಿರುತ್ತಾರೆ.

ಈ ಸಂಬಂಧ ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶ್ರೀ ಶಿವಕುಮಾರ್ ರವರಿಗೆ ಕಾರಣ ಕೇಳಿನ ನೋಟೀಸ್ ಜಾರಿ ಮಾಡಲಾಗಿರುತ್ತದೆ. ಶ್ರೀ ಶಿವಕುಮಾರ್ ರವರು ದಿನಾಂಕ:18.06.018 ರಂದು ಸಮಜಾಯಿಷಿ ನೀಡಿದ್ದು, ಸಮಜಾಯಿಷಿ ಪತ್ರದಲ್ಲಿ ತಿಳಿಸಿರುವಂತೆ 14ನೇ ಹಣಕಾಸು ಯೋಜನೆಯಲ್ಲಿ ವಿತರಿಸಿರುವ ರೂ.9.80 ಲಕ್ಷಗಳ ಎರಡು ಚೆಕ್‌ಗಳು ನಗದೀಕರಿಸಿರುವ ಖಾತೆದಾರರನ್ನು ಭೇಟಿಯಾಗಿರುವುದಾಗಿ ಮತ್ತು ಸದರಿಯವರ ಮನವೊಲಿಸಿ 14ನೇ ಹಣಕಾಸು ಯೋಜನೆಯ ಖಾತೆ ಸಂಖ್ಯೆ 64184082329 ಕ್ಕೆ ಬ್ಯಾಂಕ್ ಮುಖಾಂತರ ರೂ.9.80 ಲಕ್ಷಗಳನ್ನು ಜಮಾ ಮಾಡಿಸಿರುವುದಾಗಿ ತಿಳಿಸಿ ಸಂಬಂಧಪಟ್ಟ ಚಲನ್ ಪ್ರತಿಗಳನ್ನು ಮತ್ತು ಧನಾದೇಶದ ನಕಲನ್ನು ನೀಡಿರುತ್ತಾರೆ. ರಮ್ಮನಹಳ್ಳಿ ಗ್ರಾಮ ಪಂಚಾಯ್ತಿಯ ಹಿಂದಿನ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀ ಶಿವಕುಮಾರ್ ಮತ್ತು ಅಧ್ಯಕ್ಷರಾದ ಶ್ರೀಮತಿ ರೇಖಾ ರವರು ಸಹಿ ಮಾಡಿರುವ ಚೆಕ್‌ಗಳನ್ನು 4 ತಿಂಗಳುಗಳ ನಂತರ ಡ್ರಾ ಮಾಡಿಕೊಂಡಿರುತ್ತಾರೆಂದು ಶ್ರೀ ಶಿವಕುಮಾರ್ ರವರೇ ಲಿಖಿತವಾಗಿ ತಿಳಿಸಿರುತ್ತಾರೆ.

ಈ ಎರಡು ಚೆಕ್‌ಗಳನ್ನು ಶ್ರೀ ಶಿವಕುಮಾರ್ ಮತ್ತು ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶ್ರೀಮತಿ ರೇಖಾ ಇವರುಗಳು ಜಂಟಿ ಸಹಿ ಮಾಡಿ ವಿತರಿಸಿದ್ದು, ರೂ.9.80.ಲಕ್ಷಗಳು ಚೆಕ್‌ಗಳನ್ನು ನಗದೀಕರಿಸಿ, ಹಣ ದುರುಪಯೋಗವಾಗಿದ್ದು, ಈ ಪ್ರಕರಣಗಳು ಬೆಳಕಿಗೆ ಬಂದಾಗ, ರೂ.9.80 ಲಕ್ಷಗಳನ್ನು 14ನೇ ಹಣಕಾಸು ಯೋಜನೆ ಖಾತೆಗೆ ಮರುಪಾವತಿಸಿರುವುದು ಕಂಡು ಬಂದಿರುತ್ತದೆ. ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಜಂಟಿಯಾಗಿ ಸಹಿ ಮಾಡಿರುವ ಮುಖಾಂತರ ರೂ.9.80 ಲಕ್ಷಗಳ ಹಣ ದುರುಪಯೋಗವಾಗಿರುವುದು ಕಂಡು ಬಂದಿರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ 43(ಎ), 48(4) ಮತ್ತು 48(5) ರಡಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರುಗಳು ಹಾಗೂ ಸದಸ್ಯರುಗಳ ಮೇಲಿನ ಆರೋಪಗಳಿಗೆ ವಿಚಾರಣೆ ನಡೆಸಲು ಮೇಲೆ ಕ್ರಮಾಂಕ (2)ರಲ್ಲಿ ಪ್ರಾದೇಶಿಕ ಆಯುಕ್ತರುಗಳಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದ್ದು, ಅದರನ್ವಯ ಸದರಿ ಪ್ರಕರಣದ ವಿಚಾರಣೆ ನಡೆಸಿ, ಸರ್ಕಾರಕ್ಕೆ ಸಲ್ಲಿಸುವಂತೆ ಮೇಲೆ ಓದಲಾದ ಕ್ರಮಾಂಕ (3)ರ ಪತ್ರದಲ್ಲಿ ಈ ಪ್ರಕರಣವನ್ನು ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ರವರಿಗೆ ವಹಿಸಲಾಗಿತ್ತು.

ಅದರಂತೆ, ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರು ಈ ಪ್ರಕರಣದ ವಿಚಾರಣೆ ನಡೆಸಿ, ಎದುರುದಾರರಾದ ಶ್ರೀಮತಿ ರೇಖಾ, ಹಿಂದಿನ ಅಧ್ಯಕ್ಷರು, ರವರು ತಮ್ಮ ಅಧಿಕಾರಾವಧಿಯಲ್ಲಿ ಅಧಿಕಾರ ದುರುಪಯೋಗಪಡಿಸಿಕೊಂಡಿರುವುದು ಸಾಬೀತಾಗಿದ್ದು, ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48(4) ರನ್ವಯ ಕ್ರಮ ಜರುಗಿಸಬಹುದಾಗಿ, ಅಭಿಪ್ರಾಯಪಟ್ಟು ಮೇಲೆ ಓದಲಾದ ಕ್ರಮಾಂಕ (4)ರಲ್ಲಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತಾರೆ.

ಪ್ರಾದೇಶಿಕ ಆಯುಕ್ತರ ಅಭಿಪ್ರಾಯದನ್ವಯ ಕ್ರಮವಹಿಸುವ ಪೂರ್ವದಲ್ಲಿ ಎದುರುದಾರರಾದ ಶ್ರೀಮತಿ ರೇಖಾ, ಹಿಂದಿನ ಅಧ್ಯಕ್ಷರು, ಮೇಲೆ ಓದಲಾದ ಕ್ರಮಾಂಕ (5)ರಲ್ಲಿ ಎರಡನೇ ಕಾರಣ ಕೇಳುವನೋಟೀಸ್ ಜಾರಿ ಮಾಡಲಾಗಿದೆ.

ಎದುರುದಾರರಿಗೆ ಅಹವಾಲು ಹೇಳಿಕೊಳ್ಳಲು ಅವಕಾಶವನ್ನು ನೀಡಲು ನಿರ್ಣಯಿಸಿ, ಮೇಲೆ ಓದಲಾದ ಕ್ರಮಾಂಕ(6) ರಲ್ಲಿ ವಿಚಾರಣಾ ನೋಟಿಸ್ಸನ್ನು ಜಾರಿ ಮಾಡಿ ಪ್ರಕರಣವನ್ನು ದಿನಾಂಕ:15.03.2021 ರಂದು ಹಾಗೂ ದಿನಾಂಕ:25.08.2021 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂಚಾಯತ್ ರಾಜ್) ಇವರ ಅರೆ ನ್ಯಾಯಿಕ ನ್ಯಾಯಾಲಯದಲ್ಲಿ ವಿಚಾರಣೆ ನಡೆಸಲಾಗಿದೆ. ದಿನಾಂಕ:15.03.2021 ರ ವಿಚಾರಣೆಗೆ ಎದುರುದಾರರು ಹಾಜರಾಗಿದ್ದು ಮತ್ತು ಅವರ ಪರ ವಕೀಲರು ಹಾಜರಾಗಿ, ಕಾಲಾವಕಾಶವನ್ನು ಕೋರಿರುತ್ತಾರೆ. ಅದರಂತೆ ಕಾಲಾವಕಾಶವನ್ನು ನೀಡಿ ಪ್ರಕರಣವನ್ನು ಮುಂದೂಡಲಾಯಿತು. ಮುಂದುವರೆದು ದಿನಾಂಕ:25.08.2021 ರಂದು ಪ್ರಕರಣದ ವಿಚಾರಣೆ ನಿಗಧಿಪಡಿಲಾಯಿತು. ದಿನಾಂಕ:25.08.2021 ರ ವಿಚಾರಣೆಗೆ ಎದುರುದಾರರಾದ ಶ್ರೀಮತಿ ರೇಖಾ, ಹಿಂದಿನ ಅಧ್ಯಕ್ಷರು, ಗೈರು ಹಾಜರಾಗಿದ್ದು, ಸದರಿಯವರ ಪರವಾಗಿ ವಕೀಲರು ಹಾಜರಾಗಿರುತ್ತಾರೆ. ಎದುರುದಾರರಿಗೆ ಅಹವಾಲು ಹೇಳಿಕೊಳ್ಳಲು ಈಗಾಗಲೇ ಸಾಕಷ್ಟು ಅವಕಾಶ ನೀಡಿರುವುದರಿಂದ ಪ್ರಕರಣವನ್ನು ಆದೇಶಕ್ಕಾಗಿ ಕಾಯ್ದಿರಿಸಲಾಯಿತು.

ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಅಧಿನಿಯಮ ಪ್ರಕರಣ 43(ಎ) ಹಾಗೂ 48(4) ರಡಿ ಸದರಿ ಪ್ರಕರಣವನ್ನು ಪರಿಶೀಲಿಸಿದಾಗ, ಎದುರುದಾರರಾದ ಶ್ರೀಮತಿ ರೇಖಾ, ಹಿಂದಿನ ಅಧ್ಯಕ್ಷರು, ತಮ್ಮ ಅಧಿಕಾರಾವಧಿಯಲ್ಲಿ ಅಧಿಕಾರ ದುರುಪಯೋಗಪಡಿಸಿಕೊಂಡಿರುವುದು ಕಂಡು ಬಂದಿರುತ್ತದೆ.

ಈ ಹಿನ್ನೆಲೆಯಲ್ಲಿ ಶ್ರೀಮತಿ ರೇಖಾ, ಹಿಂದಿನ ಅಧ್ಯಕ್ಷರು, ರಮ್ಮನಹಳ್ಳಿ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ 2020 ರ ಪ್ರಕರಣ 43(ಎ)(vi) ರಡಿ ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ರಮ್ಮನಹಳ್ಳಿ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಹಾಗೂ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಲು ನಿರ್ಧರಿಸಿ, ಅದರಂತೆ ಈ ಕೆಳಕಂಡ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 363 ಗ್ರಾಪಂಅ 2020, ಬೆಂಗಳೂರು, ದಿನಾಂಕ:30.11.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ರೇಖಾ, ಹಿಂದಿನ ಅಧ್ಯಕ್ಷರು, ರಮ್ಮನಹಳ್ಳಿ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧದ ಅಧಿಕಾರ ದುರುಪಯೋಗಪಡಿಸಿಕೊಂಡಿರುವ ಆರೋಪವು ಸಾಬೀತಾಗಿದ್ದು, ಸದರಿಯವರು ಪ್ರಸ್ತುತ ಗ್ರಾಮ ಪಂಚಾಯಿತಿಯ ಸದಸ್ಯರಲ್ಲದ ಕಾರಣ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್(ತಿದ್ದುಪಡಿ) ಅಧಿನಿಯಮ 2093ರ ಪ್ರಕರಣ 43(ಎ)(vi) ರಡಿ ಹಾಗೂ ಸದರಿ ಅಧಿನಿಯಮದ 12(ಎಲ್) ರನ್ವಯ ಆರು ವರ್ಷಗಳ ಕಾಲ ಚುನಾವಣೆಗೆ ನಿಲ್ಲದಂತೆ ಅನರ್ಹಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Chetna 30/11/21

(ಚೇತನ ಎಂ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. (ಜಿ.ಪಂ)

**ಗೆ:**

1) ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು.

2) ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ ರಸ್ತೆ, ಬೆಂಗಳೂರು-09.
3) ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ.
4) ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ ಮೈಸೂರು, ಮೈಸೂರು ಜಿಲ್ಲೆ.
5) ಶ್ರೀಮತಿ ರೇಖಾ, ಹಿಂದಿನ ಅಧ್ಯಕ್ಷರು, ರಮ್ಮನಹಳ್ಳಿ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ.
6) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನಿರ್ದೇಶಕರು(ಪಂ.ರಾಜ್-1), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.